<u>ಸಾಕ್ಷಿಗೆ ದಿಃ14-03-2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ಎ ಎ ಎಂ ವಕೀಲರಿಂದಃ-</u>

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಎಲ್ಲ ಸಂಗತಿಗಳು ಸರಿ ಹಾಗೂ ಸತ್ಯವಿರುತ್ತವೆ ಮತ್ತು ನನಗೆ ತಿಳಿದಿರುತ್ತವೆ.

ಪ್ರಾಪರ್ಟಿ ರಜಿಸ್ಟರ್ ಕಾರ್ಡಿನ ದೃಡಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 1 ಎಂದು, ನೋಂದಾಯಿತ ಖರೀದಿ ಪತ್ರದ ದೃಡಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನುನಿಪಿ 2 ಎಂದು, ಆಸ್ತಿ ನಂ. 240 ಮತ್ತು 241 ರ ರೂಲ್ಡ ಕಾರ್ಡಿನ ದೃಡಿಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ 3 ಮತ್ತು 4 ಎಂದು, ಒಂದು ಪ್ಲೇನ್ ಕಾರ್ಡಿನ ದೃಡಿಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 5 ಎಂದು, ಸಿಟಿ ಸರ್ವೇ ಅಧಿಕಾರಿಗಳಿಗೆ ನೀಡಿದ ನೋಟಿಸಿನ ದೃಡಿಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 6 ಎಂದು, ಎರಡು ಜವಾಬ್ ಪ್ರತಿಗಳ ದೃಡಿಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ 7 ಮತ್ತು 8 ಎಂದು, ಮೋಡಿ ಭಾಷೆಯಲ್ಲಿರುವ ದಾವಾ ಆಸ್ತಿಯ ನೋಂದಾಯಿತ ಖರೀದಿ ಪತ್ರದ ದೃಡಿಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 9 ಎಂದು ಮತ್ತು ಅದನ್ನು ಕನ್ನಡ ಭಾಷೆಗೆ ಅನುವಾದಿಸಿದ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 9 ಎ ಎಂದು, ಮೋಡಿ ಭಾಷೆಯಲ್ಲಿರುವ ಎರಡು ನೋಂದಾಯಿತ ಖರೀದಿ ಪತ್ರದ ದೃಡಿಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 10 ಮತ್ತು 11 ಎಂದು ಮತ್ತು ಅವುಗಳನ್ನು ಕನ್ನಡ ಭಾಷೆಗೆ ಅನುವಾದಿಸಿದ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 10 ಎ ಮತ್ತು 11 ಎ ಎಂದು, ಎಂಟು ಆಸ್ತಿ ತೆರಿಗೆ ರಶೀದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 12 ರಿಂದ 19 ಎಂದು ಗುರುತಿಸಲಾಯಿತು.

ಮೇಲಿನ ನನ್ನ ಸಾಕ್ಷಿಯನ್ನು ಪರಿಗಣಿಸಿ ಮುಖ್ಯ ವಿಚಾರಣೆಯಲ್ಲಿ ಕೇಳಿದಂತೆ ದಾವೆಯನ್ನು ಡಿಕ್ರೀ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

<u>ಪಾಟೀ ಸವಾಲು : ಪ್ರತಿವಾದಿ ಪರ ಶ್ರೀ. ಎಸ್ ಸಿ ಯು ವಕೀಲರಿಂದಃ-</u>

ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು)
ಓದಿ ಹೇ. ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ. ದಂ., ಬನಹಟ್ಟಿ .

ಅಸಲು ದಾವಾ ಸಂ.147/2022
ಪಿ.ಡಬ್ಲ್ಯೂ.-1